ಕರ್ನಾಟಕ ಸರಕಾರ
ಕೃಷಿ ಇಲಾಖೆ
ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯ, ಬೆಳಗಾವಿ.
e-mail :- jdabgm@rediffmail.com ದೂರವಾಣಿ:-0831-2407232

ಸಂ:ಜಂಕೃನಿಬೆ/ತಾಂ-3/ಹೈಟೆಕ್ ಹಾರ್ವೆಸ್ಟರ್ ಹಬ್ /2023-24 ದಿನಾಂಕ: 20/01/2024

## ಪತ್ರಿಕಾ ಪ್ರಕಟಣೆ

# ಹೈಟೆಕ್ ಹಾರ್ವೆಸ್ಟರ್ ಹಬ್‌ಗಳಿಗೆ ಕೃಷಿ ಇಲಾಖೆಯಿಂದ ಅರ್ಜಿ ಆಹ್ವಾನ

2023-24 ನೇ ಸಾಲಿನಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಅನುಷ್ಠಾನ ಮಾಡಲು ಚಾಲ್ತಿಯಲ್ಲಿರು ನೋಂದಾಯಿತ ಸಂಘ-ಸಂಸ್ಥೆಗಳು (FPO ಗಳನ್ನೊಳಗೊಂಡಂತೆ)/ ಯಂತ್ರಧಾರೆ ಕೇಂದ್ರಗಳು/ ವೈಯಕ್ತಿಕ ಫಲಾನುಭವಿಗಳಿಗೆ ಸಹಾಯಧನವನ್ನು ನೀಡಲಾಗುವುದು. ಸಾಮಾನ್ಯ ವರ್ಗದ ರೈತರಿಗೆ ಗರಿಷ್ಠ ಶೇ.50 ರಂತೆ ಪ.ಜಾ/ಪ.ಪಂ. ವರ್ಗದ ರೈತರಿಗೆ ಗರಿಷ್ಠ ಶೇ.70 ರಂತೆ ಹಾಗೂ ಸಂಘ-ಸಂಸ್ಥೆಗಳಿಗೆ ಗರಿಷ್ಠ ಶೇ.70 ರಂತೆ ಸಹಾಯಧನವನ್ನು ನೀಡಲಾಗುವುದು

ಬೆಳಗಾವಿ ಜಿಲ್ಲೆಗೆ ಎರಡು (2) Combo ಹಾರ್ವೆಸ್ಟರ್ ಹಬ್ (ಸಂಘ/ಸಂಸ್ಥೆಗಳಿಗೆ), ಒಂದು (1) ಕಂಬೈನ್ಡ್ ಹಾರ್ವೆಸ್ಟರ್ ಹಬ್ (ಸಾಮಾನ್ಯ-ವೈಯಕ್ತಿಕ) ಹಾಗೂ ಏಳು (7) ಶುಗರ್‌ಕೇನ್ ಹಾರ್ವೆಸ್ಟರ್ ಹಬ್ (2 ಸಂಘ/ಸಂಸ್ಥೆಗಳಿಗೆ, 2 ಸಾಮಾನ್ಯ-ವೈಯಕ್ತಿಕ, 2 ಪ.ಜಾ ವೈಯಕ್ತಿಕ, ಮತ್ತು 1 ಪ.ಪಂ. ವೈಯಕ್ತಿಕ) ಕೇಂದ್ರ ಕಛೇರಿಯಿಂದ ಕಾರ್ಯಕ್ರಮವಿದ್ದು, ಜಿಲ್ಲಾ ಮಟ್ಟದ ಉಪಕರಣ ಸಮಿತಿ ಸಭೆಯಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ ಅವರ ಅಧ್ಯಕ್ಷತೆಯಲ್ಲಿ ನಿಯಮಾನುಸಾರ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ನಿರ್ವಹಿಸಲು ಸಂಸ್ಥೆ/ ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

ಅರ್ಜಿದಾರರು ಇಚ್ಛಿಸುವ ಹಬ್‌ಗೆ ಅರ್ಜಿ ಜೊತೆ, ನೊಂದಾಯಿಸಿದ ಸಂಸ್ಥೆ ಪ್ರಮಾಣ ಪತ್ರ, ಪಹಣಿ, ಜಾತಿಪ್ರಮಾಣ ಪತ್ರ, ಗುರುತಿನಪತ್ರ, ಬ್ಯಾಂಕ್‌ಖಾತೆ ಸಂಖ್ಯೆ, ರೂ.20/-ಗಳ ಛಾಪಾ ಕಾಗದದ ಮೇಲೆ ಹಬ್ ಅನ್ನು ಪರಭಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ, 2 ವರ್ಷಗಳ ಲೆಕ್ಕ ಪರಿಶೋಧನಾ ಪತ್ರ, ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಕಟಾವಿಗೆ ಮಾಡಿಕೊಂಡ ಲಿಖಿತ ಒಪ್ಪಂದ ಪ್ರಮಾಣ ಪತ್ರ ಹಾಗೂ ಸಹಾಯಧನವು Credit Linked Back ended subsidy ಆಗಿರುವುದರಿಂದ ಸಂಬಂಧಿಸಿದ ಬ್ಯಾಂಕ್‌ನಿಂದ **"ತಾತ್ವಿಕ ಸಾಲ ಮಂಜೂರಾತಿ ಪತ್ರ" (In Principle Loan Sanction Letter)** ವನ್ನು ಸಂಭಂದಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸುವುದು. ಕೃಷಿ ಯಂತ್ರಧಾರೆ ಕೇಂದ್ರಗಳ/ ಸಹಕಾರಿ ಸಂಘಗಳ ನಿಬಂಧನೆಯಂತೆ /ಕಂಪನಿ ಕಾಯ್ದೆಯಡಿ ನೋಂದಾಯಿಸಿದ ಸಂಘ-ಸಂಸ್ಥೆಗಳು ಮಾತ್ರ ಅರ್ಹತೆಯನ್ನು ಹೊಂದಿರುತ್ತವೆ. ಅರ್ಜಿ ಸಲ್ಲಿಸಲು 05/02/2024 ಕೊನೆಯ ದಿನವಾಗಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರು, ಬೆಳಗಾವಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಜಂಟಿ ಕೃಷಿ ನಿರ್ದೇಶಕರು,
ಬೆಳಗಾವಿ

ಪ್ರತಿಯನ್ನು: 1) ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಇವರಿಗೆ ಮಾಹಿತಿಗೆ ಹಾಗೂ ಸದರಿ ಪತ್ರಿಕಾ ಪ್ರಕಟಣೆಯನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ.

2) ಜಿಲ್ಲಾ NIC ಮುಖ್ಯಸ್ಥರು ಇವರಿಗೆ ಕಳುಹಿಸುತ್ತಾ ಜಿಲ್ಲಾ NIC Website ನಲ್ಲಿ ಮಾಹಿತಿಯನ್ನು ಪ್ರಕಟಿಸಲು ಕೋರಿದೆ.